**Akashvani : Bangalore**
**National Bulletin In Kannada**
**28.07.2024 / 9.05 am**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**28.07.2024 / 9.05 am**

**<><*<><>*><>**

<u>ಮುಖ್ಯಾಂಶಗಳು</u>

**<><*<><>*><>**

೧. ರಾಷ್ಟ್ರಪತಿ ದ್ರೌಪದಿ ಮುರ್ಮು ಅವರಿಂದ ವಿವಿಧ ರಾಜ್ಯಗಳಿಗೆ ರಾಜ್ಯಪಾಲರ ನೇಮಕ

೨. ಇಂದು ಬೆಳಗ್ಗೆ ೧೧ ಗಂಟೆಗೆ ಮನ್ ಕಿ ಬಾತ್‌ನ ೧೧೨ ನೇ ಆವೃತ್ತಿಯಲ್ಲಿ ಪ್ರಧಾನಿ ನರೇಂದ್ರ ಮೋದಿಯವರ ಮನದ ಮಾತು

೩. ಕೇಂದ್ರ ಸಚಿವ ಡಾ.ಎಸ್.ಜೈಶಂಕರ್ ಟೋಕಿಯೋಗೆ ಭೇಟಿ; ನಾಳೆ ನಡೆಯಲಿರುವ ಕ್ವಾಡ್ ವಿದೇಶಾಂಗ ಸಚಿವರ ಸಭೆಯಲ್ಲಿ ಭಾಗಿ

೪. ಪ್ಯಾರಿಸ್ ಒಲಿಂಪಿಕ್ಸ್ : ಇಂದು ವಿವಿಧ ಸ್ಪರ್ಧೆಗಳಲ್ಲಿ ಭಾರತೀಯ ಕ್ರೀಡಾಪಟುಗಳ ಸೆಣಸಾಟ

**<><*<><>*><>**

ರಾಷ್ಟ್ರಪತಿ ದ್ರೌಪದಿ ಮುರ್ಮು, ವಿವಿಧ ರಾಜ್ಯಗಳಿಗೆ ರಾಜ್ಯಪಾಲರನ್ನು ನೇಮಿಸಿದ್ದಾರೆ. ರಾಜಸ್ಥಾನದ ರಾಜ್ಯಪಾಲರಾಗಿ ಮಹಾರಾಷ್ಟ್ರ ವಿಧಾನಸಭಾ ಮಾಜಿ ಸ್ಪೀಕರ್ ಹರಿಭಾವು ಕಿಸನ್‌ರಾವ್ ಬಾಗ್ಡೆ ಅವರನ್ನು ನೇಮಕ ಮಾಡಲಾಗಿದೆ. ತ್ರಿಪುರಾದ ಮಾಜಿ ಉಪಮುಖ್ಯಮಂತ್ರಿಯಾಗಿದ್ದ ಜಿಷ್ಣು ದೇವ್ ವರ್ಮಾ ಅವರನ್ನು ತೆಲಂಗಾಣ, ರಾಜ್ಯಪಾಲರಾಗಿ ರಾಜಸ್ಥಾನದ ಮಾಜಿ ಸಂಸದ ಓಮ್ ಪ್ರಕಾಶ್ ಮಾಥುರ್ ಅವರನ್ನು ಸಿಕ್ಕಿಂ, ಮಾಜಿ ಕೇಂದ್ರ ಸಚಿವ ಸಂತೋಷ್ ಕುಮಾರ್ ಗಂಗ್ವಾರ್ ಅವರನ್ನು ಜಾರ್ಖಂಡ್, ಅಸ್ಸಾಂನ ಮಾಜಿ ಸಂಸದ ರಮೇಶ್ ದೇಕಾ ಛತ್ತೀಸ್‌ಘಢ್, ಕರ್ನಾಟದ ಮಾಜಿ ಸಚಿವ ಸಿ.ಎಚ್.ವಿಜಯಶಂಕರ್ ಅವರನ್ನು ಮೇಘಾಲಯ, ರಾಜ್ಯಪಾಲರಾಗಿ ಜಾರ್ಖಂಡ್‌ನ ಪ್ರಸ್ತುತ ರಾಜ್ಯಪಾಲರಾದ ಸಿ.ಪಿ.ರಾಧಾಕೃಷ್ಣನ್ ಅವರನ್ನು ಮಹಾರಾಷ್ಟ್ರ ರಾಜ್ಯಪಾಲರನ್ನಾಗಿ ನೇಮಕ ಮಾಡಲಾಗಿದೆ. ಅಸ್ಸಾಂನ ಪ್ರಸ್ತುತ ರಾಜ್ಯಪಾಲರಾಗಿರುವ ಗುಲಾಬ್ ಚಂದ್ ಕಟಾರಿಯಾ ಅವರನ್ನು ಪಂಜಾಬ್ ರಾಜ್ಯಪಾಲರಾಗಿ ಮತ್ತು ಕೇಂದ್ರಾಡಳಿತ ಪ್ರದೇಶ ಚಂಡೀಘಡ್‌ನ ಆಡಳಿತಾಧಿಕಾರಿಯಾಗಿ ನೇಮಿಸಲಾಗಿದೆ. ಪ್ರಸ್ತುತ ಸಿಕ್ಕಿಂ ರಾಜ್ಯಪಾಲರಾಗಿರುವ ಲಕ್ಷ್ಮಣ್ ಪ್ರಸಾದ್ ಆಚಾರ್ಯ ಅವರಿಗೆ ಅಸ್ಸಾಂ ರಾಜ್ಯಪಾಲ ಹಾಗೂ ಮಣಿಪುರ ರಾಜ್ಯಪಾಲರಾಗಿ ಹೆಚ್ಚುವರಿ ಹೊಣೆಗಾರಿಕೆ ನೀಡಲಾಗಿದೆ. ಮಾಜಿ ಐ.ಎ.ಎಸ್ ಅಧಿಕಾರಿ ಕೆ.ಕೈಲಾಶ್‌ನಾಥನ್ ಅವರನ್ನು ಪುದುಚೇರಿಯ ಲೆಫ್ಟಿನೆಂಟ್ ಗವರ್ನರ್ ಆಗಿ ನೇಮಕ ಮಾಡಲಾಗಿದೆ.

**<><*<><>*><>**

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ ಆಕಾಶವಾಣಿಯ ಜನಪ್ರಿಯ ಕಾರ್ಯಕ್ರಮ 'ಮನ್ ಕಿ ಬಾತ್' ಕಾರ್ಯಕ್ರಮ ಇಂದು ಬೆಳಗ್ಗೆ ೧೧ ಗಂಟೆಗೆ ಪ್ರಸಾರವಾಗಲಿದೆ. ದೇಶ ಮತ್ತು ವಿದೇಶಗಳಲ್ಲಿನ ಭಾರತೀಯರನ್ನು ಉದ್ದೇಶಿಸಿ ಅವರು ತಮ್ಮ ಮನದಾಳದ ಮಾತನ್ನು ಹಂಚಿಕೊಳ್ಳಲಿದ್ದಾರೆ. ಇದು ಮನದ ಮಾತು ಕಾರ್ಯಕ್ರಮದ ೧೧೨ನೇ ಆವೃತ್ತಿಯಾಗಿದೆ. ಮೂರನೇ ಬಾರಿಗೆ ಪ್ರಧಾನಿಯಾಗಿ ಅಧಿಕಾರ ವಹಿಸಿಕೊಂಡ ನಂತರ ನರೇಂದ್ರ ಮೋದಿ ಅವರ ಎರಡನೇ ಮನದ ಮಾತು ಕಾರ್ಯಕ್ರಮ ಇದಾಗಿದೆ. ಆಕಾಶವಾಣಿ ಹಾಗೂ ದೂರದರ್ಶನದ ಎಲ್ಲ ತರಂಗಾಂತರಗಳಲ್ಲಿ ಈ ಕಾರ್ಯಕ್ರಮ ಬಿತ್ತರವಾಗಲಿದೆ. ಯೂಟ್ಯೂಬ್, ಸಾಮಾಜಿಕ ಜಾಲತಾಣಗಳಲ್ಲೂ ಈ ಕಾರ್ಯಕ್ರಮವನ್ನು ಆಲಿಸಬಹುದು.

**<><*<><>*><>**

ಸುಪ್ರೀಂಕೋರ್ಟ್‌ನಲ್ಲಿ ನಾಳೆಯಿಂದ ಶನಿವಾರದವರೆಗೆ ನಡೆಯಲಿರುವ ವಿಶೇಷ ಲೋಕ್ ಅದಾಲತ್‌ನಲ್ಲಿ ಜನರು ಪಾಲ್ಗೊಳ್ಳುವಂತೆ ನ್ಯಾಯಮೂರ್ತಿ ಸೂರ್ಯಕಾಂತ್ ಕರೆ ನೀಡಿದ್ದಾರೆ. ಆಕಾಶವಾಣಿಗೆ ನೀಡಿದ ವಿಶೇಷ ಸಂದರ್ಶನದಲ್ಲಿ ಅವರು, ವೈವಾಹಿಕ ಪ್ರಕರಣಗಳು, ಭೂಮಿ ಸಂಬಂಧಿತ ವ್ಯಾಜ್ಯಗಳು, ಮೋಟಾರ್ ವಾಹನ ಅಪಘಾತ ಕ್ಲೇಮುಗಳು, ಭೂಸ್ವಾಧೀನ ಪರಿಹಾರ ಮೊದಲಾದ ವಿಷಯಗಳ ಪ್ರಕರಣಗಳ ಇತ್ಯರ್ಥಕ್ಕೆ ಜನರು, ಈ ಅವಕಾಶವನ್ನು ಸದುಪಯೋಗಪಡಿಸಿಕೊಳ್ಳಬೇಕು ಎಂದು ಮನವಿ ಮಾಡಿದರು. ವಿಡಿಯೋ ಕಾನ್ಫರೆನ್ಸಿಂಗ್ ಮೂಲಕ ಕೂಡ ಅದಾಲತ್‌ನಲ್ಲಿ ಪಾಲ್ಗೊಳ್ಳಬಹುದು ಎಂದು ಅವರು ಮಾಹಿತಿ ನೀಡಿದರು.

**<><*<><>*><>**

ಬಿಜೆಪಿ ಅಧಿಕಾರದಲ್ಲಿರುವ ರಾಜ್ಯಗಳ ಮುಖ್ಯಮಂತ್ರಿ ಹಾಗೂ ಉಪಮುಖ್ಯಮಂತ್ರಿಗಳ ಸಭೆ ನವದೆಹಲಿಯಲ್ಲಿ ನಿನ್ನೆ ನಡೆಯಿತು. ಈ ಸಭೆಯಲ್ಲಿ ಪ್ರಧಾನಮಂತ್ರಿ ನರೇಂದ್ರ ಮೋದಿ, ಬಿಜೆಪಿ ಅಧ್ಯಕ್ಷ ಜೆ.ಪಿ.ನಡ್ಡಾ, ಕೇಂದ್ರ ಗೃಹ ಸಚಿವ ಅಮಿತ್ ಶಾ ಉಪಸ್ಥಿತರಿದ್ದರು. ಸಭೆಯಲ್ಲಿ ಭಾಗವಹಿಸಿದ್ದ ಮುಖ್ಯಮಂತ್ರಿಗಳ ಹಾಗೂ ಉಪಮುಖ್ಯಮಂತ್ರಿಗಳ ಜೊತೆ ನರೇಂದ್ರ ಮೋದಿಯವರು ಅನೇಕ ವಿಷಯಗಳ ಕುರಿತು ಚರ್ಚೆ ನಡೆಸಿದರು. ಬಿಜೆಪಿಯು ನಿಯಮಿತ ಸಮಯದಲ್ಲಿ ಈ ರೀತಿಯ ಸಭೆಗಳನ್ನು ನಡೆಸುತ್ತಿರುತ್ತದೆ. ಈ ಸಭೆಯ ಉದ್ದೇಶ, ರಾಜ್ಯಗಳಲ್ಲಿ ಯೋಜನೆಯ ಸಮೀಕ್ಷೆ ನಡೆಸುವುದು ಹಾಗೂ ಕೇಂದ್ರ ಸರ್ಕಾರದ ಜನಪರ ಯೋಜನೆಗಳ ಲಾಭವು ಸಾಮಾನ್ಯ ಜನರಿಗೆ ತಲುಪಿಸುವುದಾಗಿದೆ.

**<><*<><>*><>**

ವಿದೇಶಾಂಗ ವ್ಯವಹಾರಗಳ ಸಚಿವ ಡಾ.ಎಸ್.ಜೈಶಂಕರ್ ಅವರು ಎರಡು ದಿನಗಳ ಜಪಾನ್ ಪ್ರವಾಸ ಹಿನ್ನೆಲೆಯಲ್ಲಿ ಇಂದು ಬೆಳಿಗ್ಗೆ ಟೋಕಿಯೋ ತಲುಪಿದ್ದಾರೆ. ಜಪಾನ್‌ನಲ್ಲಿರುವ ಭಾರತದ ರಾಯಭಾರಿ ಸಿಬಿ ಜಾರ್ಜ್ ಅವರು, ವಿಮಾನ ನಿಲ್ದಾಣದಲ್ಲಿ ವಿದೇಶಾಂಗ ಸಚಿವರನ್ನು ಸ್ವಾಗತಿಸಿದರು. ಈ ನಡುವೆ ಡಾ.ಎಸ್.ಜೈಶಂಕರ್ ಅವರು ಎಡೋಗಾವಾದ ಫ್ರೀಡಂ ಪ್ಲಾಜಾದಲ್ಲಿ ಮಹಾತ್ಮ ಗಾಂಧಿಯವರ ಪ್ರತಿಮೆಯನ್ನು ಅನಾವರಣಗೊಳಿಸಿದರು. ಈ ಸಂದರ್ಭದಲ್ಲಿ ಜಪಾನ್‌ನ ವಿದೇಶಾಂಗ ವ್ಯವಹಾರಗಳ ಸಂಸದೀಯ ಉಪ ಸಚಿವ ಮಸಾಹಿರೊ ಕೊಮುರಾ ಮತ್ತು ಎಡೊಗಾವಾ ಮೇಯರ್ ತಕೇಶಿ ಸೈಟೊ ಉಪಸ್ಥಿತರಿದ್ದರು. ಜಪಾನಿನ ಸಹವರ್ತಿ ಯೊಕೊ ಕಾಮಿಕಾವಾ ಆಹ್ವಾನದ ಮೇರೆಗೆ ಡಾ.ಎಸ್.ಜೈಶಂಕರ್ ಅವರು ನಾಳೆ ನಡೆಯಲಿರುವ ಕ್ವಾಡ್ ವಿದೇಶಾಂಗ ಸಚಿವರ ಸಭೆಯಲ್ಲಿ

ಭಾಗವಹಿಸಲು ಜಪಾನ್‌ಗೆ ಭೇಟಿ ನೀಡುತ್ತಿದ್ದಾರೆ. ಸಭೆಯಲ್ಲಿ, ಭಾರತ, ಜಪಾನ್, ಯುಎಸ್ ಮತ್ತು ಆಸ್ಟ್ರೇಲಿಯಾದ ವಿದೇಶಾಂಗ ಸಚಿವರುಗಳು ಕಳೆದ ವರ್ಷ ಸೆಪ್ಟೆಂಬರ್‌ನಲ್ಲಿ ನ್ಯೂಯಾರ್ಕ್‌ನಲ್ಲಿ ನಡೆದ ಕೊನೆಯ ಸಭೆಯಲ್ಲಿ ನಡೆದ ವಿಷಯಗಳ ಬಗ್ಗೆ ಚರ್ಚೆ ಮುಂದುವರಿಸಲಿದ್ದಾರೆ. ಈ ಸಭೆಯಲ್ಲಿ ಇಂಡೋ-ಪೆಸಿಫಿಕ್ ಪ್ರದೇಶದ ಬೆಳವಣಿಗೆಗಳ ಕುರಿತು ಅಭಿಪ್ರಾಯಗಳನ್ನು ವಿನಿಮಯ ಮಾಡಿಕೊಳ್ಳಲಿದ್ದಾರೆ ಮತ್ತು ಕ್ವಾಡ್ ಉಪಕ್ರಮಗಳ ಪ್ರಗತಿಯನ್ನು ಪರಿಶೀಲಿಸಲಿದ್ದಾರೆ. ಪ್ರಾದೇಶಿಕ ಮತ್ತು ಅಂತರಾಷ್ಟ್ರೀಯ ಸಮಸ್ಯೆಗಳ ಪರಿಹಾರ ಹಾಗೂ ಸಾರ್ವಜನಿಕ ಸರಕುಗಳ ವಿತರಣೆಯ ಮೂಲಕ ಆಯ ಪ್ರದೇಶದ ಸಮಕಾಲೀನ ಆದ್ಯತೆಗಳನ್ನು ಪರಿಹರಿಸುವ ನಿಟ್ಟಿನಲ್ಲಿ ಚರ್ಚೆ ನಡೆಯಲಿದೆ.

**<><*<><>*><>**

ಭಾರತದಲ್ಲಿ ಉಕ್ಕಿನ ಉತ್ಪಾದನೆ ಸರ್ಕಾರಿ ಮೂಲಸೌಕರ್ಯ ಯೋಜನೆಗಳಿಗೆ ದೃಢವಾದ ಬೇಡಿಕೆಯಿಂದ ಪ್ರೇರೇಪಿಸಲ್ಪಟ್ಟಿದೆ ಹಾಗೂ ೨೦೩೦ ರ ವೇಳೆಗೆ ೩೦೦ ಮಿಲಿಯನ್ ಟನ್‌ಗಳನ್ನು ಮೀರುವ ನಿರೀಕ್ಷೆಯಿದೆ ಎಂದು ಉಕ್ಕು ಕಾರ್ಯದರ್ಶಿ ನಾಗೇಂದ್ರ ನಾಥ್ ಸಿನ್ಹಾ ಹೇಳಿದ್ದಾರೆ. ನವದೆಹಲಿಯಲ್ಲಿ ಭಾರತ್ ಚೇಂಬರ್ ಆಫ್ ಕಾಮರ್ಸ್ ಉದ್ದೇಶಿಸಿ ಮಾತನಾಡಿದ ಅವರು, ಪ್ರಸ್ತುತ ಉಕ್ಕಿನ ಬೇಡಿಕೆ, ಸರ್ಕಾರದಿಂದ ಮೂಲಸೌಕರ್ಯ ಉತ್ತೇಜನದೊಂದಿಗೆ ಸ್ಥಿರವಾಗಿದೆ ಮತ್ತು ಸುಮಾರು ೧೦ ಪ್ರತಿಶತದಷ್ಟು ಬೆಳವಣಿಗೆಯನ್ನು ನಿರೀಕ್ಷಿಸಲಾಗುತ್ತಿದೆ ಎಂದು ಹೇಳಿದರು.

ಜಿಡಿಪಿ ಬೆಳವಣಿಗೆ ಮತ್ತು ಸರ್ಕಾರಿ ಮತ್ತು ಖಾಸಗಿ ವಲಯಗಳಿಂದ ಮೂಲಸೌಕರ್ಯಕ್ಕೆ ನಿರಂತರ ಒತ್ತು ನೀಡುವ ನಡುವೆ, ಉಕ್ಕಿನ ಬೇಡಿಕೆ ಹೆಚ್ಚಾಗಲಿದೆ ಎಂದು ಅವರು ಹೇಳಿದ್ದಾರೆ. ಈ ವಾರದ ಆರಂಭದಲ್ಲಿ, ಕೇಂದ್ರ ಉಕ್ಕು ಮತ್ತು ಭಾರೀ ಕೈಗಾರಿಕೆಗಳ ಸಚಿವ ಎಚ್.ಡಿ.ಕುಮಾರಸ್ವಾಮಿ ಅವರು ಪರಿಣಾಮಕಾರಿ ನಿರ್ಧಾರ ಹಾಗೂ ಕಾರ್ಯತಂತ್ರದ ಯೋಜನೆಗಾಗಿ ಮಧ್ಯಸ್ಥಗಾರರಿಗೆ ಕ್ರಿಯಾಶೀಲ ತಂತ್ರಗಾರಿಕೆಯನ್ನು ಒದಗಿಸುವ ನಿಟ್ಟಿನಲ್ಲಿ ನವೀಕರಿಸಿದ ಸ್ಟೀಲ್ ಆಮದು ಮಾನಿಟರಿಂಗ್ ಸಿಸ್ಟಮ್ ಸಿಮ್ಸ್ ೨.೦ ಪೋರ್ಟಲ್‌ಗೆ ಚಾಲನೆ ನೀಡಿದ್ದರು.

**<><*<><>*><>**

ತೆಲಂಗಾಣದ ಭದ್ರಾಚಲಂನಲ್ಲಿ ಗೋದಾವರಿ ನದಿಯು ಅಪಾಯದ ಮಟ್ಟ ಮೀರಿ ೫೩ ಅಡಿ ಎತ್ತರದಲ್ಲಿ ಮೀರಿ ಹರಿಯುತ್ತಿದೆ, ನದಿಯ ಮೇಲ್ಭಾಗದ ಪ್ರದೇಶಗಳಲ್ಲಿ ಭಾರಿ ಮಳೆಯಿಂದಾಗಿ ಒಳಹರಿವಿನ ಪ್ರಮಾಣದಲ್ಲಿ ಹೆಚ್ಚಾಗಿದೆ. ನಿನ್ನೆ ಸಂಜೆ ಕಂದಾಯ ಅಧಿಕಾರಿಗಳು ಅಪಾಯದ ಸಂಕೇತದ ಸೂಚನೆಯನ್ನು ನೀಡಿದ್ದಾರೆ. ಸ್ಥಳೀಯ ಅಧಿಕಾರಿಗಳಿಗೆ ಅಗತ್ಯ ಕ್ರಮ ಕೈಗೊಳ್ಳುವಂತೆ ಸೂಚಿಸಲಾಗಿದೆ ಎಂದು ಜಿಲ್ಲಾಧಿಕಾರಿ ಜಿತೇಶ್ ವಿ ಪಾಟೀಲ್ ಹೇಳಿದ್ದಾರೆ.

**<><*<><>*><>**

ದೆಹಲಿಯ ಹಳೆ ರಾಜೇಂದ್ರ ನಗರದಲ್ಲಿನ ಕೋಚಿಂಗ್ ಇನ್‌ಸ್ಟಿಟ್ಯೂಟ್‌ನ ನೆಲಮಾಳಿಗೆಯು ಭಾರೀ ಮಳೆಯಿಂದಾಗಿ ಜಲಾವೃತಗೊಂಡು ಮೂವರು ವಿದ್ಯಾರ್ಥಿಗಳು ಸಾವನ್ನಪ್ಪಿದ್ದಾರೆ. ನೆಲಮಾಳಿಗೆಯಲ್ಲಿ ಸಿಲುಕಿದ್ದ ಕೆಲ ವಿದ್ಯಾರ್ಥಿಗಳನ್ನು ರಕ್ಷಿಸಲಾಗಿದ್ದು, ಮೂವರನ್ನು ಆಸ್ಪತ್ರೆಗೆ ದಾಖಲಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಈ ಸಂಬಂಧ ಪೊಲೀಸರು ಕ್ರಿಮಿನಲ್ ಮೊಕದ್ದಮೆ

ದಾಖಲಿಸಿದ್ದು, ಇದುವರೆಗೆ ಇಬ್ಬರನ್ನು ಬಂಧಿಸಿದ್ದಾರೆ. ಘಟನೆಯ ಬಗ್ಗೆ ದೆಹಲಿ ಸರ್ಕಾರ ಮ್ಯಾಜಿಸ್ಟ್ರೇಟ್ ತನಿಖೆಗೆ ಆದೇಶಿಸಿದೆ.

<><*<><>*><>

ಪ್ಯಾರಿಸ್ ಒಲಿಂಪಿಕ್ಸ್‌ನ ಆರಂಭದ ದಿನವಾದ ನಿನ್ನೆ ಭಾರತದ ಅಥ್ಲೀಟ್‌ಗಳು ಸಾಧನೆಯತ್ತ ದಾಪುಗಾಲು ಹಾಕಿದರು. ೧೦ ಮೀಟರ್ ಏರ್ ರೈಫಲ್ ಮಹಿಳೆಯರ ಸ್ಪರ್ಧೆಯಲ್ಲಿ, ಮನು ಭಾಕರ್, ೫೮೦ ಅಂಕಗಳು ಮತ್ತು ೨೭ ಒಳಗಿನ ಒಟ್ಟು ಅಂಕಗಳೊಂದಿಗೆ ಅರ್ಹತೆಯಲ್ಲಿ ೩ ನೇ ಸ್ಥಾನ ಗಳಿಸಿದ ನಂತರ ಫೈನಲ್ ಪ್ರವೇಶಿಸಿದರು. ಕಳೆದ ರಾತ್ರಿ ಯವೆಸ್-ಡು-ಮನೋಯಿರ್ ಕ್ರೀಡಾಂಗಣದಲ್ಲಿ ನಡೆದ ಆರಂಭಿಕ ಪೂಲ್-ಬಿ ಪಂದ್ಯದಲ್ಲಿ ನ್ಯೂಜಿಲೆಂಡ್ ವಿರುದ್ಧ ೩-೨ ಅಂತರದ ಜಯದೊಂದಿಗೆ ಭಾರತೀಯ ಪುರುಷರ ಹಾಕಿ ತಂಡ, ಅಭಿಯಾನವನ್ನು ಪ್ರಾರಂಭಿಸಿತು. ನಾಯಕ ಹರ್ಮನ್‌ಪ್ರೀತ್ ಸಿಂಗ್ ಅವರ ಪೆನಾಲ್ಟಿ ಸ್ಟ್ರೋಕ್ ಒಂದು ನಿಮಿಷ ಬಾಕಿ ಇರುವಾಗ ನ್ಯೂಜಿಲೆಂಡ್ ಅನ್ನು ಸೋಲಿಸಲು ಸಹಾಯ ಮಾಡಿತು.

<><*<><>*><>

ಪ್ಯಾರಿಸ್ ಒಲಿಂಪಿಕ್ಸ್‌ನ ಎರಡನೇ ದಿನವಾದ ಇಂದು ಭಾರತದ ಮನು ಭಾಕರ್ ಅವರು, ಚಟೆರಾಕ್ಸ್ ಶೂಟಿಂಗ್ ಸೆಂಟರ್‌ನಲ್ಲಿ ನಡೆಯಲಿರುವ ಮಹಿಳೆಯರ ೧೦ ಮೀಟರ್ ಏರ್ ರೈಫಲ್ ಫೈನಲ್ಸ್ ಪಂದ್ಯದಲ್ಲಿ ಪದಕಕ್ಕಾಗಿ ಸೆಣಸಲಿದ್ದಾರೆ. ಪಂದ್ಯ ಭಾರತೀಯ ಕಾಲಮಾನ ಮಧ್ಯಾಹ್ನ ೩.೩೦ಕ್ಕೆ ನಡೆಯಲಿದೆ.  ಪುರುಷ ಮತ್ತು ಮಹಿಳೆಯರ ೧೦ ಮೀಟರ್ ಏರ್ ರೈಫಲ್ಸ್ ಅರ್ಹತಾ ಪಂದ್ಯದಲ್ಲಿ ಭಾರತದ ರಮಿತಾ ಜಿಂದಾಲ್ ಮತ್ತು ಇಳಾವೆನಿಲ್ ವೆಲಾರಿವನ್ ಹಾಗೂ ಸಂದೀಪ್ ಸಿಂಗ್ ಮತ್ತು ಅರ್ಜುನ್ ಬಬುಟಾ ಇಂದು ಮಧ್ಯಾಹ್ನ ಸೆಣಸಲಿದ್ದಾರೆ.  ಭಾರತೀಯ ಅಥ್ಲೀಟ್‌ಗಳು ಬಿಲ್ಲುಗಾರಿಕೆ, ಟೇಬಲ್ ಟೆನ್ನಿಸ್ ಹಾಗೂ ಬ್ಯಾಡ್ಮಿಂಟನ್ ಪಂದ್ಯಗಳಲ್ಲಿ ಸೆಣಸಲಿದ್ದಾರೆ.  ದೀಪಿಕಾ ಕುಮಾರಿ, ಅಂಕಿತಾ ಭಕತ್ ಹಾಗೂ ಭಜನ್ ಕೌರ್ ಈ ಮೂವರನ್ನೊಳಗೊಂಡ ಭಾರತೀಯ ಮಹಿಳಾ ಬಿಲ್ಲುಗಾರಿಕಾ ತಂಡ ಸೆಮಿಫೈನಲ್ ಹಂತಕ್ಕೆ ಏರುವತ್ತ ಕಣ್ಣಿಟ್ಟಿದೆ.  ಇಂದು ಮಧ್ಯಾಹ್ನ ನಡೆಯಲಿರುವ ಗುಂಪು ಹಂತದ ಮಹಿಳಾ ಸಿಂಗಲ್ಸ್ ಬ್ಯಾಡ್‌ಮಿಂಟನ್ ಮೊದಲ ಪಂದ್ಯದಲ್ಲಿ ಎರಡು ಬಾರಿಯ ಒಲಿಂಪಿಕ್ ಪದಕ ವಿಜೇತೆ ಪಿ.ವಿ.ಸಿಂಧು, ಪಾಕಿಸ್ತಾನದ ಫಾತಿಮಾ ಅಬ್ದುಲ್ ರಝಾಕ್ ಅವರೊಂದಿಗೆ ಸೆಣಸಲಿದ್ದಾರೆ. ಪುರುಷರ ಸಿಂಗಲ್ಸ್ ಟೆನಿಸ್ ವಿಭಾಗದ ಗುಂಪು ಹಂತದ ಪಂದ್ಯದಲ್ಲಿ ಎಚ್ ಎಸ್ ಪ್ರಣೋಯ್, ಜರ್ಮನಿಯ ಫೇಬಿಯನ್ ರೋತ್ ಅವರೊಂದಿಗೆ ಆಡಲಿದ್ದಾರೆ.  ಪುರುಷರ ಸಿಂಗಲ್ಸ್ ಟೆನಿಸ್‌ನ ಮೊದಲ ಸುತ್ತಿನಲ್ಲಿ ಭಾರತದ ಅಗ್ರ ಶ್ರೇಯಾಂಕಿತ ಸುಮಿತ್ ನಡಾಲ್ ಫ್ರೆಂಚ್ ಸಹವರ್ತಿ ಕೊರೆಂಟಿನ್ ಮೌಟೆಟ್ ಅವರೊಂದಿಗೆ  ಆಡಲಿದ್ದಾರೆ. ಪುರುಷರ ಡಬಲ್ಸ್ ವಿಭಾಗದ ಮೊದಲ ಸುತ್ತಿನಲ್ಲಿ ಭಾರತದ ಅನುಭವಿ ಆಟಗಾರರಾದ ರೋಹನ್ ಬೋಪಣ್ಣ ಹಾಗೂ ಶ್ರೀರಾಂ ಬಾಲಾಜಿ ಜೋಡಿ ಫ್ರೆಂಚ್‌ನ ಗೇಲ್ ಮೋನ್ಫಿಲ್ಸ್ ಮತ್ತು ಎಡ್ವರ್ಡ್ ರೋಜರ್ ವ್ಯಾಸೆಲಿನ್ ಜೋಡಿಯೊಂದಿಗೆ ಸೆಣಸಲಿದೆ. ಪ್ಯಾರಿಸ್ ಒಲಿಂಪಿಕ್ಸ್‌ನಲ್ಲಿ ಭಾರತದ ಕಿರಿಯ ಅಥ್ಲಿಟ್ ಧಿನಿಧಿ ದೇಸಿಂಗು ಮಹಿಳೆಯರ ೨೦೦ ಮೀಟರ್ ಫ್ರೀಸ್ಟೈಲ್ ಈಜು ಸ್ಪರ್ಧೆಯಲ್ಲಿ  ಇಂದು ಸ್ಪರ್ಧಿಸಲಿದ್ದಾರೆ. ಪುರುಷರ ೧೦೦ ಮೀಟರ್ ಬ್ಯಾಕ್‌ಸ್ಟ್ರೋಕ್ ಈಜು ಸ್ಪರ್ಧೆಯಲ್ಲಿ ಶ್ರೀಹರಿ ಸ್ಪರ್ಧಿಸಲಿದ್ದಾರೆ. ಮಹಿಳಾ ಬಾಕ್ಸಿಂಗ್‌ನ ೫೦ ಕೆ ಜಿ ವಿಭಾಗದಲ್ಲಿ ಎರಡು ಬಾರಿಯ ವಿಶ್ವಚಾಂಪಿಯನ್ ನಿಖತ್  ಝರೀನ್ ತಮ್ಮ ಅಭಿಯಾನ ಆರಂಭಿಸಲಿದ್ದು, ಅವರು ಜರ್ಮನಿಯ ಮ್ಯಾಕ್ಸಿ ಕ್ಯಾರಿನಾ ಕ್ಲೊಯೆಟ್ಜರ್ ಜತೆ ಆಡಲಿದ್ದಾರೆ. ಇಂದು

ಟೇಬಲ್ ಟೆನ್ನಿಸ್‌ನ ಮಹಿಳಾ ಸಿಂಗಲ್ಸ್ ವಿಭಾಗದಲ್ಲಿ ಶ್ರೀಜಾ ಅಕುಲಾ, ಸ್ವೀಡನ್‌ನ ಕ್ರಿಸ್ಟಿನಾ ಕಾಲ್‌ಬರ್ಗ್ ಅವರೊಂದಿಗೆ ಸೆಣಸಿದರೆ, ಮನಿಕಾ ಬಾತ್ರಾ ಅವರು, ಗ್ರೇಟ್‌ಬ್ರಿಟನ್‌ನ ಅನ್ನಾ ಹರ್ಸೆ ಅವರ ಜತೆ ಆಡಲಿದ್ದಾರೆ. ಪುರುಷರ ಸಿಂಗಲ್ಸ್ ವಿಭಾಗದಲ್ಲಿ ಭಾರತದ ಶರತ್ ಕಮಾಲ್ ಅವರು ಸ್ಲೋವೇನಿಯಾದ ಡೆನಿ ಕೋಝುಲ್ ಅವರ ಜತೆ ಹಾಗೂ ಹರ್ಮಿತ್ ದೇಸಾಯಿ ಫ್ರೆಂಚ್‌ನ ಫೆಲಿಕ್ಸ್ ಲೆಬ್ರುನ್ ಅವರೊಂದಿಗೆ ಆಡಲಿದ್ದಾರೆ. ರೋಯಿಂಗ್‌ನ ಸ್ಕಲ್ಸ್ ರಪೇಶಾಜ್ ಸ್ಪರ್ಧೆಯಲ್ಲಿ ಪುರುಷರ ಸಿಂಗಲ್ಸ್ ವಿಭಾಗದಲ್ಲಿ ಭಾರತದ ಬಲರಾಜ್ ಪನ್ವಾರ್ ಸ್ಪರ್ಧಿಸಲಿದ್ದಾರೆ.

**<><*<>** ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು **<>*><>**

**<><*<>** ನಮ್ಮ ಮುಂದಿನ ವಾರ್ತಾ ಪ್ರಸಾರ ಅಪರಾಹ್ನ ೧.೧೦ ಕ್ಕೆ **<>*><>**